ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂಸತ್ ಬಜೆಟ್

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 04/1/2020

## ಜ.31ರಿಂದ ಬಜೆಟ್ ಅಧಿವೇಶನ ಸಾಧ್ಯತೆ

**ನವದೆಹಲಿ:** ಸಂಸತ್‌ನ ಬಜೆಟ್ ಅಧಿವೇಶನ ಜ.31ರಿಂದ ಆರಂಭವಾಗಲಿದ್ದು, ಫೆ.1ರಂದು ಆಯವ್ಯಯ ಮಂಡಿಸುವ ಸಾಧ್ಯತೆ ಇದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ನೇತೃತ್ವದ ಸಚಿವ ಸಂಪುಟದ ಸಂಸದೀಯ ಸಮಿತಿಯು ಬಜೆಟ್ ಅಧಿವೇಶನದ ದಿನಾಂಕ ನಿಗದಿಪಡಿಸಿದ ಬಳಿಕ ಕೇಂದ್ರ ಸರ್ಕಾರ ಅಧಿಕೃತವಾಗಿ ಪ್ರಕಟಿಸಲಿದೆ. ಬಜೆಟ್ ಅಧಿವೇಶನದಲ್ಲಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಜಂಟಿ ಸದನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇದೇ ವೇಳೆ ಆರ್ಥಿಕ ಸಮೀಕ್ಷೆಯನ್ನು ಮಂಡಿಸುವ ಸಂಭವ ಇದೆ. ಅಧಿವೇಶನ ಏಪ್ರಿಲ್ ವರೆಗೆ ಮುಂದುವರಿಯಲಿದೆ ಎಂದು ಮೂಲಗಳು ತಿಳಿಸಿವೆ.

5